ಕರ್ನಾಟಕ ಸರ್ಕಾರ

ತಾಂತ್ರಿಕ ಶಿಕ್ಷಣ ಇಲಾಖೆ

**File No:** DTE-ADMI0ACM2/59/2021

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ:02-03-2021.

-:: ಸುತ್ತೋಲೆ ::-

**ವಿಷಯ:** 2020-21ನೇ ಸಾಲಿನ ಡಿಪ್ಲೋಮಾ ತರಗತಿಗಳ ಮರು ನಿಗಧಿಪಡಿಸಲಾಗಿರುವ ತಾತ್ಕಾಲಿಕ ಶೈಕ್ಷಣಿಕ ವೇಳಾಪಟ್ಟಿಯ ಕುರಿತು.

**ಉಲ್ಲೇಖ:** 1. ಈ ಕಛೇರಿ ಸಮಸಂಖ್ಯೆ ಸುತ್ತೋಲೆ ದಿನಾಂಕ:15-12-2020.
2. ಹಲವು ಪಾಲಿಟೆಕ್ನಿಕ್ ಪ್ರಾಂಶುಪಾಲರುಗಳ ಮನವಿ ಪತ್ರಗಳು.

-000000-

2020-21ನೇ ಸಾಲಿನಲ್ಲಿ ರಾಜ್ಯದ ಎಲ್ಲಾ ಡಿಪ್ಲೋಮಾ ಕಾಲೇಜುಗಳಲ್ಲಿ ಸರ್ಕಾರದ ಆದೇಶದಲ್ಲಿನ ಪ್ರಮಾಣಿತ ಕಾರ್ಯಾಚರಣಾ ವಿಧಾನಗಳನ್ನು ಅಳವಡಿಸಿಕೊಂಡು ಶೈಕ್ಷಣಿಕ ಚಟುವಟಿಕೆಗಳನ್ನು ಪ್ರಾರಂಭಿಸಿ, ಪ್ರವೇಶ ಪಡೆದ ಅಭ್ಯರ್ಥಿಗಳಿಗೆ ನಿಗಧಿತ ಅವಧಿಯೊಳಗೆ ಪಾಠ ಪ್ರವಚನಗಳನ್ನು ಪೂರ್ಣಗೊಳಿಸುವ ನಿಟ್ಟಿನಲ್ಲಿ ತಾತ್ಕಾಲಿಕ ಶೈಕ್ಷಣಿಕ ವೇಳಾಪಟ್ಟಿಯನ್ನು ಉಲ್ಲೇಖ(1)ರ ಈ ಕಛೇರಿ ಸುತ್ತೋಲೆಯಲ್ಲಿ ನಿಗಧಿಪಡಿಸಲಾಗಿತ್ತು. ಆದರೆ, ಉಲ್ಲೇಖ(2)ರ ಹಲವು ಪಾಲಿಟೆಕ್ನಿಕ್ ಪ್ರಾಂಶುಪಾಲರುಗಳ ಮನವಿ ಪತ್ರದಲ್ಲಿ ಪ್ರಥಮ ವರ್ಷದ ಡಿಪ್ಲೋಮಾ ವಿದ್ಯಾರ್ಥಿಗಳಿಗೆ ತರಗತಿಗಳನ್ನು ನಡೆಸಲು ನೀಡಿರುವ ಅಂತಿಮ ದಿನಾಂಕವನ್ನು ವಿಸ್ತರಿಸುವ ಕುರಿತು ಮನವಿ ಸಲ್ಲಿಸಿರುತ್ತಾರೆ. ಪರಿಶೀಲಿಸಲಾಗಿ, ನಿಗಧಿಪಡಿಸಲಾಗಿದ್ದ ವೇಳಾಪಟ್ಟಿಯನ್ನು ಪರಿಷ್ಕರಿಸಿ ಈ ಕೆಳಕಂಡಂತೆ ತಾತ್ಕಾಲಿಕ ವೇಳಾಪಟ್ಟಿಯನ್ನು ಮರು ನಿಗಧಿಪಡಿಸಲಾಗಿದೆ.

-: 2020-21ನೇ ಸಾಲಿನ ತಾತ್ಕಾಲಿಕ ಶೈಕ್ಷಣಿಕ ವೇಳಾಪಟ್ಟಿ :-

| ಕ್ರ.ಸಂ. | ಶೈಕ್ಷಣಿಕ ಕಾರ್ಯಕ್ರಮ | ಅವಧಿ/ದಿನಾಂಕ | |
|---|---|---|---|
| | | ಪ್ರಾರಂಭ | ಮುಕ್ತಾಯ |
| 01. | 01ನೇ ಮತ್ತು 03ನೇ ಸೆಮಿಸ್ಟರ್‌ನ ಆನ್‌ಲೈನ್ ಮತ್ತು ಭೌತಿಕ ಸಂಪರ್ಕ ತರಗತಿಗಳ (contact classes) ಪ್ರಾರಂಭ ಹಾಗೂ ಮುಕ್ತಾಯ | 17-11-2020 | 31-03-2021* (Extended Term days Because of pandemic) |
| 02. | ಅಂತಿಮ ವರ್ಷದ 05ನೇ ಸೆಮಿಸ್ಟರ್‌ನ ಭೌತಿಕ ತರಗತಿಗಳ ಅಥವಾ ಆನ್‌ಲೈನ್ ಮತ್ತು ಭೌತಿಕ ಸಂಪರ್ಕ ತರಗತಿಗಳ (contact classes) ಪ್ರಾರಂಭ ಹಾಗೂ ಮುಕ್ತಾಯ | 17-11-2020 | 31-03-2021* (Extended Term days Because of pandemic) |
| 03. | 01, 03 ಮತ್ತು 05ನೇ ಸೆಮಿಸ್ಟರ್ ಪರೀಕ್ಷೆಗಳು | | |
| | ಅ) ಪ್ರಾಯೋಗಿಕ | 05-04-2021 | 16-04-2021 |
| | ಆ) ಥಿಯರಿ | 21-04-2021 | 12-05-2021 |
| 04. | 02, 04 ಮತ್ತು 06ನೇ ಸೆಮಿಸ್ಟರ್‌ನ ತರಗತಿಗಳ ಪ್ರಾರಂಭ ಹಾಗೂ ಮುಕ್ತಾಯ | 13-05-2021 | 02-09-2021 |

| | | | |
|---|---|---|---|
| 05. | 02, 04 ಮತ್ತು 06ನೇ ಸೆಮಿಸ್ಟರ್ ಪರೀಕ್ಷೆಗಳು | | |
| | ಅ) ಪ್ರಾಯೋಗಿಕ | 06-09-2021 | 18-09-2021 |
| | ಆ) ಥಿಯರಿ | 22-09-2021 | 18-10-2021 |
| 06. | ಆಂತರಿಕ ಪರೀಕ್ಷೆಗಳು<br>(1) ಮೊದಲನೆಯ<br>(2) ಎರಡನೇಯ<br>(3) ಮೂರನೇಯ | 06ನೇ ವಾರದಲ್ಲಿ<br>10ನೇ ವಾರದಲ್ಲಿ<br>14ನೇ ವಾರದಲ್ಲಿ | |
| 07 | ಆಂತರಿಕ ಪರೀಕ್ಷೆಗಳ ಅಂಕಗಳ ಪರಿಶೀಲನೆ | 15ನೇ ವಾರದಲ್ಲಿ | |
| 08 | ಹಾಜರಾತಿ ಕೊರತೆ ಹಾಗೂ ಪಠ್ಯೇತರ ಶೈಕ್ಷಣಿಕ ಚಟುವಟಿಕೆಗಳ ಬಗ್ಗೆ ವಿದ್ಯಾರ್ಥಿಗಳು ಮತ್ತು ಪೋಷಕರ ಜೊತೆ ಸಾಂತ್ವನ ಕಾರ್ಯಕ್ರಮ | 08ನೇ ವಾರದಲ್ಲಿ | |

(*2020-21ನೇ ಸಾಲಿನ ತಾತ್ಕಾಲಿಕ ಶೈಕ್ಷಣಿಕ ವೇಳಾಪಟ್ಟಿಯು, ತುರ್ತು ಅಗತ್ಯ ನೈಸರ್ಗಿಕ ಪರಿಸ್ಥಿತಿಗೆ ಅನುಗುಣವಾಗಿ, ಅಲ್ಪ ಬದಲಾವಣೆಗೆ ಒಳಪಟ್ಟಿರುತ್ತೆ*)

ಕೋವಿಡ್-19 ಸಾಂಕ್ರಾಮಿಕ ರೋಗದ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕೆ ಕ್ರಮಗಳನ್ನು ಅನುಸರಿಸಿ ಪ್ರವೇಶ ಪಡೆದ ಅಭ್ಯರ್ಥಿಗಳಿಗೆ ನಿಯಮಾನುಸಾರ ಪಾಠ ಪ್ರವಚನಗಳನ್ನು ನಡೆಸಲು ಸೂಕ್ತ ವ್ಯವಸ್ಥೆ ಮಾಡುವುದಲ್ಲದೆ, ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಮೇಲ್ಕಂಡಂತೆ ಮರು ನಿಗದಿಪಡಿಸಲಾಗಿರುವ ತಾತ್ಕಾಲಿಕ ಶೈಕ್ಷಣಿಕ ವೇಳಾಪಟ್ಟಿಯನುಸಾರ ಡಿಪ್ಲೋಮಾ ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ ಪ್ರಮಾಣಿತ ಕಾರ್ಯಚರಣಾ ವಿಧಾನಗಳನ್ನು ಅಳವಡಿಸಿಕೊಂಡು ವಿಶೇಷ ತರಗತಿಗಳನ್ನು ತೆಗೆದುಕೊಳ್ಳುವುದರ ಮೂಲಕ ಪಠ್ಯಕ್ರಮದನ್ವಯ ನಿಗದಿತ ಪಾಠ ಪ್ರವಚನಗಳನ್ನು ಮುಗಿಸುವಲ್ಲಿ ಕ್ರಮತೆಗೆದುಕೊಂಡು ಕಾರ್ಯದರ್ಶಿಗಳು, ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು ಇವರಿಗೆ ವರದಿ ಮಾಡುವುದು. ಪ್ರಯುಕ್ತ, ಇದನ್ನು ರಾಜ್ಯದ ಎಲ್ಲಾ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳು ಗಮನದಲ್ಲಿರಿಸಿಕೊಂಡು ನಿಯಮಗಳ ಪ್ರಕಾರ ಪಾಠ ಪ್ರವಚನಗಳನ್ನು ಮುಕ್ತಾಯಗೊಳಿಸುವಲ್ಲಿ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಲಾಗಿದೆ.

ಆಯುಕ್ತರು
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಇವರಿಗೆ,

ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರುಗಳಿಗೆ - ಸೂಕ್ತ ಕ್ರಮಕ್ಕಾಗಿ ಹಾಗೂ ಅನುಸರಣೆಗಾಗಿ.

ಪ್ರತಿ:-

1. ಮಾನ್ಯ ಆಯುಕ್ತರ ಆಪ್ತಶಾಖೆಗೆ.
2. ಮಾನ್ಯ ನಿರ್ದೇಶಕರ ಆಪ್ತಶಾಖೆಗೆ.
3. ಜಂಟಿ ನಿರ್ದೇಶಕರು(ಆಡಳಿತ), ಕಾಲೇಜು&ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
4. ಜಂಟಿ ನಿರ್ದೇಶಕರು(ಪರೀಕ್ಷೆ), ಕಾಲೇಜು&ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
5. ಆಡಳಿತಾಧಿಕಾರಿಗಳು, ಕಾಲೇಜು&ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು
6. ಸಾರ್ವಜನಿಕ ಸಂಪರ್ಕಾಧಿಕಾರಿಗಳು, ಕಾಲೇಜು&ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
7. ಇ-ಆಡಳಿತ ವಿಭಾಗಕ್ಕೆ - ಸದರಿ ಸುತ್ತೋಲೆಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು.
8. ರಿಜಿಸ್ಟ್ರಾರ್(ಪರೀಕ್ಷೆ), ಕಾಲೇಜು&ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
9. ಕಛೇರಿ ಪ್ರತಿ.